**Akashvani : Bangalore**
**Regional Bulletin In Kannada**
**10.09.2024 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**10.09.2024 / 18.40 hrs**

<><*<><>*><>

ಮುಖ್ಯಾಂಶಗಳು

<><*<><>*><>

೧. ಪಿಎಸ್‌ಐ ಪರೀಕ್ಷೆ ಮುಂದೂಡಿಕೆ ವಿಚಾರ ; ಕೆಇಎ ಅಧಿಕಾರಿಗಳೊಂದಿಗೆ ಚರ್ಚಿಸಿ ಮುಂದಿನ ಕ್ರಮ ಗೃಹ ಸಚಿವ ಪರಮೇಶ್ವರ್

೨. ನವದೆಹಲಿಯಲ್ಲಿ ರಕ್ಷಣಾ ಸಚಿವ ರಾಜ್ ಭೇಟಿಯಾದ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ - ರಾಜ್ಯದಲ್ಲಿ ರಕ್ಷಣಾ ಕಾರಿಡಾರ್ ಸ್ಥಾಪಿಸುವ ಕುರಿತಂತೆ ಚರ್ಚೆ

೩. ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಕೂಡಲೇ ಅನುದಾನ ಬಿಡುಗಡೆಗೊಳಿಸುವಂತೆ ಕಾನೂನು ಸಚಿವ ಎಚ್.ಕೆ. ಪಾಟೀಲ್ ಆಗ್ರಹ

೪. ಬೆಂಗಳೂರಿನಲ್ಲಿ ರಸ್ತೆ ಗುಂಡಿ ಮುಚ್ಚುವ ಕಾರ್ಯ ಪ್ರಗತಿಯಲ್ಲಿ - ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್

<><*<><>*><>

ಪಿಎಸ್‌ಐ ನೇಮಕಾತಿ ಪರೀಕ್ಷೆ ಮುಂದೂಡುವ ಬಗ್ಗೆ ಕೆಇಎ ಹಾಗೂ ಇಲಾಖೆ ಅಧಿಕಾರಿಗಳೊಂದಿಗೆ ಚರ್ಚಿಸಿ ಮುಂದಿನ ನಿರ್ಧಾರ ಕೈಗೊಳ್ಳುವುದಾಗಿ ಗೃಹ ಸಚಿವ ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಬಿಜೆಪಿ ನಿಯೋಗದ ಮನವಿ ಪತ್ರ ಸ್ವೀಕರಿಸಿ ಮಾತನಾಡಿದ ಅವರು, ೪೦೨ ಪಿಎಸ್‌ಐ ಹುದ್ದೆಗಳ ನೇಮಕಾತಿ ಪರೀಕ್ಷೆಯ ಹೊಣೆಯನ್ನು ಕೆಇಎಗೆ ವಹಿಸಿದ್ದು, ಇದೇ ೨೨ ರಂದು ಪರೀಕ್ಷೆ ನಡೆಯಲಿದೆ. ಆದರೆ, ಪಿಎಸ್‌ಐ ಪರೀಕ್ಷೆ ಬರೆಯಬೇಕಾದ ೧೦೦ಕ್ಕೂ ಹೆಚ್ಚು ಆಕಾಂಕ್ಷಿಗಳು ಯುಪಿಎಸ್‌ಸಿ ಮುಖ್ಯ ಪರೀಕ್ಷೆ ಬರೆಯುತ್ತಿದ್ದಾರೆ. ಹೀಗಾಗಿ ಪರೀಕ್ಷೆ ಮುಂದೂಡುವ ಕುರಿತ ಸಾಧಕ-ಬಾಧಕಗಳ ಬಗ್ಗೆ ಮತ್ತೊಮ್ಮೆ ಚರ್ಚಿಸಲಾಗುವುದು ಎಂದು ತಿಳಿಸಿದ್ದಾರೆ. ಈಗ ಪರೀಕ್ಷೆ ಮುಂದೂಡಿದರೆ ಮುಂದಿನ ೬ ತಿಂಗಳವರೆಗೆ ಪರೀಕ್ಷೆ ನಡೆಸಲು ಸಾಧ್ಯವಿಲ್ಲ ಎಂದು ಕೆಇಎ ಅಧಿಕಾರಿಗಳು ತಿಳಿಸಿದ್ದು, ಪರಿಶೀಲನೆ ನಡೆಸಲಾಗುವುದು ಎಂದು ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ.

<><*<><>*><>

ಪಿಎಸ್ಐ ಪರೀಕ್ಷೆಯನ್ನು ಒಂದು ವಾರ ಮುಂದೂಡುವಂತೆ ಕೋರಲಾಗಿದೆ ಎಂದು ಬಿಜೆಪಿ ಯುವ ಮೋರ್ಚಾ ರಾಜ್ಯಧ್ಯಕ್ಷ, ಶಾಸಕ ಧೀರಜ್ ಮುನಿರಾಜು ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಕೆಇಎ ವತಿಯಿಂದ ಪಿಎಸ್ಐ ಪರೀಕ್ಷೆ ನಡೆಸುತ್ತಿದ್ದು, ಯುಪಿಎಸ್ಸಿ ಮುಖ್ಯ ಪರೀಕ್ಷೆ ಬರೆಯುವವರು, ಪಿಎಸ್ಐ ಪರೀಕ್ಷೆ ಪಾಸ್ ಆಗುತ್ತಾರೆ. ಹೀಗಾಗಿ ಅವರಿಗೆ ಅನಾನುಕೂಲ ವಾಗಬಾರದು ಎಂದು ಹೇಳಿದ್ದಾರೆ. ಒಂದು ವಾರ ಪರೀಕ್ಷೆಯನ್ನು ಮುಂದೂಡಿ ಎಂದು ಅಭ್ಯರ್ಥಿಗಳು ಮನವಿ ಮಾಡಿದ್ದು, ಸರ್ಕಾರ ಸ್ಪಂದಿಸುವಂತೆ ತಿಳಿಸಿದ್ದಾರೆ.

<><*<><>*><>

ಕರ್ನಾಟಕದ ಭಾರೀ ಕೈಗಾರಿಕೆ ಮತ್ತು ಮಧ್ಯಮ ಕೈಗಾರಿಕೆ ಸಚಿವ ಎಂ.ಬಿ. ಪಾಟೀಲ್ ನವದೆಹಲಿಯಲ್ಲಿಂದು ಕೇಂದ್ರ ಸಚಿವ ಕುಮಾರಸ್ವಾಮಿ ಅವರನ್ನು ಭೇಟಿಯಾಗಿ ರಾಜ್ಯದಲ್ಲಿನ ಕೈಗಾರಿಕಾಭಿವೃದ್ಧಿ ಬಗ್ಗೆ ಚರ್ಚೆ ನಡೆಸಿದರು. ಈ ವೇಳೆ ಕುಮಾರಸ್ವಾಮಿ ರಾಜ್ಯಕ್ಕೆ ಕೇಂದ್ರ ಸರ್ಕಾರದ ಪರಿಪೂರ್ಣ ಸಹಕಾರ ಇರಲಿದೆ ಎಂದು ತಿಳಿಸಿದರು.  ಇದಕ್ಕೂ ಮೊದಲು ಅವರು, ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರೊಂದಿಗೆ ಚರ್ಚೆ ನಡೆಸಿ, ಏರೋಸ್ಪೇಸ್ ಮತ್ತು ರಕ್ಷಣಾ ವಲಯಕ್ಕೆ ಸಂಬಂಧಿಸಿದ ಪ್ರಮುಖ ವಿಷಯಗಳ ಕುರಿತು ಚರ್ಚೆ ನಡೆಸಿದರು. ಕರ್ನಾಟಕದಲ್ಲಿ ರಕ್ಷಣಾ ಕಾರಿಡಾರ್‌ಗಳನ್ನು ಸ್ಥಾಪಿಸುವುದು. - ರಕ್ಷಣಾ ಕಂಪನಿಗಳ ದೇಶೀಯ ಉತ್ಪಾದನೆ ಮತ್ತು ರಫ್ತಿನ ಮೇಲಿನ ನಿರ್ಬಂಧಗಳ ಕುರಿತು. - ರಾಜ್ಯದಲ್ಲಿ ಹೂಡಿಕೆ ಮಾಡಲು ಮತ್ತು ವ್ಯವಹಾರ ವಿಸ್ತರಿಸಲು ಸಿಪಿಎಸ್‌ಯುಗಳನ್ನು ಉತ್ತೇಜಿಸುವುದು. ಕಾರವಾರ ನೌಕಾ ವಿಮಾನ ನಿಲ್ದಾಣದ ರನ್ ವೇಯನ್ನು ೨ ಸಾವಿರ ಮೀಟರ್ ನಿಂದ ೨ ಸಾವಿರ ೭೦೦ ಮೀಟರ್‌ವರೆಗೆ ವಿಸ್ತರಿಸುವುದು ಸೇರಿದಂತೆ ಹಲವು ವಿಷಯಗಳ ಬಗ್ಗೆ ಚರ್ಚಿಸಿದರು.

<><*<><>*><>

೨೦೨೩-೨೪ನೇ ಸಾಲಿನ ಮುಂಗಡ ಪತ್ರದಲ್ಲಿ ಕೇಂದ್ರ ಸರ್ಕಾರವು ಘೋಷಿಸಿರುವಂತೆ ಭದ್ರಾ ಮೇಲ್ದಂಡೆ ಯೋಜನೆಗೆ ೫ ಸಾವಿರದ ೩೦೦ ಕೋಟಿ ರೂಪಾಯಿ ಅನುದಾನವನ್ನು ತಕ್ಷಣವೇ ಬಿಡುಗಡೆ ಮಾಡಬೇಕು ಎಂದು ಕೇಂದ್ರ ಸರ್ಕಾರವನ್ನು ಕಾನೂನು ಸಚಿವ ಎಚ್.ಕೆ ಪಾಟೀಲ್ ಆಗ್ರಹಿಸಿದ್ದಾರೆ. ಭದ್ರಾ ಮೇಲ್ದಂಡೆ ಯೋಜನೆಗೆ ಸಂಬಂಧಪಟ್ಟ ಎಲ್ಲಾ ಹಂತದ ಮಂಜೂರಾತಿಗಳು ದೊರೆತಿದೆ ಹಾಗೂ ಇದು ರಾಷ್ಟ್ರೀಯ ಯೋಜನೆಯಾಗಿ ಘೋಷಣೆ ಮಾಡಲು ಎಲ್ಲಾ ಅರ್ಹತೆ ಪಡೆದಿದೆ ಎಂದು ರಾಜ್ಯ ಸಭೆಯಲ್ಲಿ ಕೇಂದ್ರ ಸರ್ಕಾರ ತಿಳಿಸಿದೆ ಎಂದು ವಿವರಿಸಿದರು. ಕೇಂದ್ರ ಸರ್ಕಾರದ ನಿಯಮಗಳು ಮತ್ತು ಷರತ್ತುಗಳಂತೆ ಎಲ್ಲಾ ಹಂತಗಳಲ್ಲೂ ಅನುಮೋದನೆಗೊಂಡು ಮುಂಗಡ ಪತ್ರದಲ್ಲಿ ಘೋಷಣೆಯಾಗಿರುವ ಯೋಜನೆಗೆ ಈಗ ನಿರಾಕರಿಸುತ್ತಿರುವುದು ಒಕ್ಕೂಟ ವ್ಯವಸ್ಥೆಯ ಉನ್ನತ ಸಂಪ್ರದಾಯಗಳಿಗೆ ಮತ್ತು ನಿಯಮಗಳಿಗೆ ತದ್ವಿರುದ್ಧವಾಗಿದೆ ಎಂದು ಹೇಳಿದರು.  ಮಹಾದಾಯಿ ಯೋಜನೆ ಕುರಿತು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಯವರ ಹೇಳಿಕೆಗೆ ಪ್ರತಿಕ್ರಿಯಿಸಿದ ಸಚಿವರು, ಬಿಜೆಪಿ ಅವಧಿಯಲ್ಲಿಯೇ ಮಹಾದಾಯಿ ಜಲ ವಿವಾದ ಕುರಿತು ಟ್ರಿಬ್ಯೂನಲ್ ರಚಿಸಲು ಕೋರಿಕೆ ಸಲ್ಲಿಸಲಾಗಿತ್ತು ಎಂದು ತಿಳಿಸಿದರು.

<><*<><>*><>

ಜಾಗತಿಕ ಸವಾಲುಗಳಿಗೆ ಪೂರಕವಾಗಿ ಇಂದು ಶಿಕ್ಷಣ ಸೇರಿದಂತೆ ದೇಶದ ಸ್ಥಿತಿಗತಿಗಳಲ್ಲಿ ಅಮೂಲಾಗ್ರ ಬದಲಾವಣೆಗಳಾಗುತ್ತಿದ್ದು, ಇದಕ್ಕೆ ಇಂದಿನ ವಿದ್ಯಾರ್ಥಿಗಳನ್ನು ಸಜ್ಜುಗೊಳಿಸಬೇಕಾದ ಅಗತ್ಯವಿದೆ ಎಂದು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್ ಸಿಂಧ್ಯಾ ಕರೆ ನೀಡಿದ್ದಾರೆ.  ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ನಡೆದ ಶಿಕ್ಷಣ ಇಲಾಖೆಯ ಸಂಪನ್ಮೂಲ ವ್ಯಕ್ತಿಗಳಿಗೆ ನಡೆದ ಮಾಹಿತಿ ಶಿಬಿರದಲ್ಲಿ ಮಾತನಾಡಿದ ಅವರು, ಈ ದಿಸೆಯಲ್ಲಿ ಶಿಕ್ಷಣ ಇಲಾಖೆ ಅಧಿಕಾರಿಗಳು ಸ್ಕೌಟ್ಸ್ ಮತ್ತು ಗೈಡ್ಸ್‌ನ ಹೆಚ್ಚು ಘಟಕಗಳನ್ನು ತೆರೆಯುವ ಮೂಲಕ ಸಂಘಟನೆಯ ಆಶಯಗಳನ್ನು ನೆರವೇರಿಸಬೇಕಿದೆ ಎಂದು ತಿಳಿಸಿದ್ದಾರೆ. ಶಿಸ್ತು ಮತ್ತು ರಾಷ್ಟ್ರಪ್ರೇಮ ಬೆಳೆಸಲು ಸ್ಕೌಟ್ಸ್ ಮತ್ತು ಗೈಡ್ಸ್ ಸಹಕಾರಿಯಾಗಿದೆ ಎಂದು ಕರೆ ನೀಡಿದ್ದಾರೆ.

<><*<><>*><>

ಬಿಬಿಎಂಪಿ ವ್ಯಾಪ್ತಿಯ ರಸ್ತೆ ಗುಂಡಿಗಳನ್ನು ಮುಚ್ಚುವ ಕಾರ್ಯ ಸಕ್ರಿಯವಾಗಿ ನಡೆಯುತ್ತಿದೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನ ಪೂರ್ವ ವಲಯ ವ್ಯಾಪ್ತಿಯಲ್ಲಿ ವಿವಿಧ ಸ್ಥಳಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಪ್ರಮುಖ ರಸ್ತೆ ಹಾಗೂ ವಾರ್ಡ್ ರಸ್ತೆಗಳನ್ನು ಕೂಡಲೇ ಮಿಲ್ಲಿಂಗ್ ಮಾಡಿ ರಸ್ತೆ ಗುಂಡಿಗಳನ್ನು ಸರಿಪಡಿಸುವಂತೆ ಸೂಚನೆ ನೀಡಿದ್ದಾರೆ. ರಸ್ತೆ ಗುಂಡಿ ಮುಚ್ಚುವ ಕಾರ್ಯವನ್ನು ಕಾಲಮಿತಿಯೊಳಗಾಗಿ ಮುಗಿಸಬೇಕು. ಇಲ್ಲವಾದಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನು ಯಾವುದೇ ಮುಲಾಜಿಲ್ಲದೆ ಅಮಾನತು ಮಾಡಲಾಗುವುದೆಂದು ಎಚ್ಚರಿಕೆ ನೀಡಿದ್ದಾರೆ.

<><*<><>*><>

ಸ್ವಚ್ಛತಾ ಹೀ ಸೇವಾ ಪಾಕ್ಷಿಕ ವಿಶೇಷ ಆಂದೋಲನವನ್ನು ಜಿಲ್ಲೆಯಾದ್ಯಂತ ಇದೇ ೧೪ ರಿಂದ ಅಕ್ಟೋಬರ್ ೨ ರವರೆಗೆ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಚಿತ್ರದುರ್ಗ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. "ಸ್ವಚ್ಛತಾ ಹೀ ಸೇವಾ ಪಾಕ್ಷಿಕ-೨೦೨೪" ಆಂದೋಲನ ಕುರಿತು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇತ್ತೀಚೆಗೆ ಏರ್ಪಡಿಸಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗ್ರಾಮೀಣ ಮತ್ತು ನಗರ ಪ್ರದೇಶದ ಜನರಲ್ಲಿ ಸ್ವಚ್ಛತೆ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಸ್ವಭಾವ-ಸ್ವಚ್ಛತೆ, ಸಂಸ್ಕಾರ-ಸ್ವಚ್ಛತೆ ಎಂಬ ಧ್ಯೇಯವಾಕ್ಯದೊಂದಿಗೆ ಹಮ್ಮಿಕೊಳ್ಳಲಾಗುತ್ತಿದೆ ಎಂದರು.

<><*<><>*><>

ಕೊಪ್ಪಳ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನ ಇಲಾಖೆ ಸಹಯೋಗದಲ್ಲಿ ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ ಅಂಗವಾಗಿ ಜನಜಾಗೃತಿ ಜಾಥಾ ಕಾರ್ಯಕ್ರಮ ನಡೆಯಿತು.  ಕೊಪ್ಪಳ ಜಿಲ್ಲೆಯ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾದಿಶ ಮಹಾಂತೇಶ ದರಗದ ಹಸಿರು ನಿಶಾನೆ ತೋರಿಸುವ ಮೂಲಕ ಜಾಥಾಕ್ಕೆ ಚಾಲನೆ ನೀಡಿದರು.

<><*<><>*><>

ಅಂತಾರಾಷ್ಟ್ರೀಯ ಸಾಕ್ಷರತಾ ದಿನಾಚರಣೆ ಅಂಗವಾಗಿ ಉಡುಪಿಯಲ್ಲಿಂದು ಉಡುಪಿ ಜಿಲ್ಲಾಧಿಕಾರಿ ಸಿ.ಸತ್ಯಭಾಮಾ ಸಾಕ್ಷರತಾ ಧ್ವಜಾರೋಹಣ ನೆರವೇರಿಸಿದರು. ಬಳಿಕ ಸಾಕ್ಷರತಾ ಪ್ರಮಾಣವಚನ ಬೋಧಿಸಿ ಮಾತನಾಡಿದ ಅವರು, ೨೦೨೭ ರ ವೇಳೆಗೆ ಇಡೀ ದೇಶದ ಜನತೆಯನ್ನು ಸಾಕ್ಷರರನ್ನಾಗಿ ಮಾಡುವ ನಿಟ್ಟಿನಲ್ಲಿ ಈ ಆಂದೋಲನ ಹಮ್ಮಿಕೊಳ್ಳಲಾಗಿದೆ. ಅಕ್ಷರ ಜ್ಞಾನ ಇದ್ದಲ್ಲಿ ಮೂಡನಂಬಿಕೆ, ಅಂಧಕಾರ ನಿವಾರಣೆ ಸಾಧ್ಯ. ಆದ್ದರಿಂದ ಪ್ರತಿಯೊಬ್ಬರೂ ಅಕ್ಷರ ಕಲಿತು ಇತರರಿಗೂ ಕಲಿಸಬೇಕು ಎಂದು ಕರೆ ನೀಡಿದರು. ಮಂಡ್ಯ ಜಿಲ್ಲಾ ಕಾರಾಗೃಹದಲ್ಲಿ ಅಂತಾರಾಷ್ಟ್ರೀಯ ಸಾಕ್ಷರತಾ ದಿನಾಚರಣೆ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಡಾ.ಕುಮಾರ, ಪ್ರತಿಯೊಬ್ಬರ ಬದುಕಿನಲ್ಲೂ ಶಿಕ್ಷಣ ಎನ್ನುವುದು ಮುಖ್ಯವಾಗಿದ್ದು, ಶಿಕ್ಷಣ ಎಂಬುವುದು ಅಳತೆಗೆ ಸಿಗದ ಮಾನದಂಡವಾಗಿದೆ ಎಂದು ಹೇಳಿದರು. ದೇಶದ ಅಭಿವೃದ್ಧಿಗೆ ಸಾಕ್ಷರತೆ ಪೂರಕವಾಗಿರುತ್ತದೆ, ಸಾಕ್ಷರತೆಯಿಂದ ನಮ್ಮಲ್ಲಿರುವ ಜ್ಞಾನವೃದ್ಧಿ ಯಾಗುವುದಲ್ಲದೆ, ಸಾಮಾಜಿಕ ಅನಿಷ್ಟ ಪದ್ಧತಿಗಳನ್ನು ನಿವಾರಿಸಬಹುದಾಗಿದೆ ಎಂದು ತುಮಕೂರು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜೇರಿ ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಇದೇ ೧೫ ರ ಅಂತಾರಾಷ್ಟೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಉತ್ತರಕನ್ನಡ ಜಿಲ್ಲೆಯಲ್ಲಿ ಅತ್ಯಂತ ವ್ಯವಸ್ಥಿತವಾಗಿ ಮತ್ತು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯವಿರುವ ಎಲ್ಲಾ ಸಿದ್ದತೆಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯ ಸೂಚನೆ ನೀಡಿದ್ದಾರೆ. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ದಾವಣಗೆರೆ ಜಿಲ್ಲೆಯಲ್ಲಿ ೮೦ ಕಿಲೋಮೀಟರ್ ಉದ್ದದ ಮಾನವ ಸರಪಳಿ ನಿರ್ಮಾಣ ಮಾಡಿ ಸಂವಿಧಾನ ಜಾಗೃತಿ ಮೂಡಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ.

<><*<><>*><>

ಪ್ರವಾಸೋದ್ಯಮವನ್ನು ಮತ್ತಷ್ಟು ಮೇಲ್ದರ್ಜೆಗೇರಿಸಲು ಹಾಗೂ ಪ್ರಮುಖ ಪ್ರವಾಸಿ ತಾಣಗಳನ್ನು ಗುರುತಿಸಿ, ವಿಶ್ವ ದರ್ಜೆಯಲ್ಲಿ ಅಭಿವೃದ್ಧಿ ಪಡಿಸಲು ಕೇಂದ್ರ ಪ್ರವಾಸೋದ್ಯಮ ಸಚಿವಾಲಯದಿಂದ "ದೇಕೋ ಅಪ್ನಾ ದೇಶ್, ಪೀಪಲ್ಸ್ ಚಾಯ್ಸ್-೨೦೨೪" ಎಂಬ ಕಾರ್ಯಕ್ರಮ ಆರಂಭಿಸಲಾಗಿದೆ. ನಾಗರಿಕರು ಹಾಗೂ ಪ್ರವಾಸಿಗರು ಆದ್ಯತೆಯ ಪ್ರವಾಸಿ ತಾಣಗಳನ್ನು ಆಯ್ಕೆ ಮಾಡಲು ಮೈ ಜಿಓವಿ ವೇದಿಕೆಯಡಿಯಲ್ಲಿ ಇದೇ ೧೫ ರವರೆಗೆ ಮತದಾನ ಮಾಡುವ ಅವಕಾಶ ಕಲ್ಪಿಸಲಾಗಿರುತ್ತದೆ. ಉಡುಪಿ ಜನರು ಜಿಲ್ಲೆಯ ಪ್ರವಾಸಿ ತಾಣದ ಕುರಿತು ಮತದಾನ ಮಾಡಬಹುದಾಗಿದೆ ಎಂದು ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ಡಾ. ಕೆ ವಿದ್ಯಾಕುಮಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ಇನ್ನು ಹವಾವರ್ತಮಾನ,

ನೈಋತ್ಯ ಮುಂಗಾರು ರಾಜ್ಯದ ಕರಾವಳಿಯಲ್ಲಿ ಸಕ್ರಿಯವಾಗಿತ್ತು. ದಕ್ಷಿಣ ಒಳನಾಡಿನಲ್ಲಿ ಸಾಧಾರಣವಾಗಿತ್ತು ಮತ್ತು ಉತ್ತರ ಒಳನಾಡಿನಲ್ಲಿ ದುರ್ಬಲವಾಗಿತ್ತು. ಕರಾವಳಿ ಕರ್ನಾಟಕದ ಬಹುತೇಕ ಕಡೆಗಳಲ್ಲಿ ಹಾಗೂ ದಕ್ಷಿಣ ಒಳನಾಡಿನ ಕೆಲವು ಸ್ಥಳಗಳಲ್ಲಿ ಇಂದು ಮಳೆಯಾಗಿದೆ. ಉತ್ತರ ಕನ್ನಡ ಜಿಲ್ಲೆಯ ಕ್ಯಾಸಲ್ ರಾಕ್, ಹೊನ್ನಾವರ ಮತ್ತು ಕೊಟ್ಟಿಗೆಹಾರದಲ್ಲಿ ತಲಾ ೭ ಸೆಂಟಿ ಮೀಟರ್ ಮಳೆಯಾಗಿದೆ. ಗೇರುಸೊಪ್ಪ, ಭಾಗಮಂಡಲ ತಲಾ ೬, ಮಂಕಿ ೫, ಸೂಳ್ಯ, ಕುಮಟಾ, ಕಾರವಾರ, ಶಿರಾಲಿ, ಕನಕಪುರ, ಕಮ್ಮರಡಿ ಮತ್ತು ಪೊನ್ನಂಪೇಟೆಯಲ್ಲಿ ತಲಾ ೪ ಸೆಂಟಿ ಮೀಟರ್ ಮಳೆಯಾಗಿದೆ. ಮುಂದಿನ ೨೪ ಗಂಟೆಗಳಲ್ಲಿ ಉಡುಪಿ, ದಕ್ಷಿಣಕನ್ನಡ, ಚಿಕ್ಕಮಗಳೂರು ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಇದೇ ವೇಳೆ ಉತ್ತರಕನ್ನಡ ಜಿಲ್ಲೆಯ ಬಹುತೇಕ ಕಡೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಂಭವಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>